**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಧೀಶರ ನ್ಯಾಯಾಲಯ ಯಾದಗಿರಿ.**

**ಸಿಸಿ ನಂ. 844/2017**

| | | |
|---|---|---|
| ಸಾಕ್ಷಿಯ ಹೆಸರುಃ | ರಾಮಲಿಂಗಪ್ಪ | ಪ್ರಾಸಾಃ 5 |
| ತಂದೆ/ಗಂಡನ ಹೆಸರುಃ | ಸಂಜೀವ ಭೀಮಶಾ | ಚಾಸಾಃ 4 |
| ವಯಸ್ಸು ಃ | 56 ವರ್ಷ | ದಿಃ 14-12-2023 |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಯರಗೋಳ | |

**<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ</u>**

ನನಗೆ ಚಾಸಾಃ 5 ರವರ ಪರಿಚಯ ಇಲ್ಲ. ನನಗೆ ಆರೋಪಿತರ ಪರಿಚಯ ಇದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನುಡಿದಿರುವುದಿಲ್ಲ. ಯಾವ ದಿನದಂದು ಏನು ಆಗಿದೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನಮ್ನ ತೋರಿಸಲಾಗಿ ಅದು ಜಪ್ತಿ ಪಂಚನಾಮೆಯಾಗಿದ್ದು ಅದನ್ನು ಸಾಕ್ಷಿಯು ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-7 ಎಂದು, ಸಾಕ್ಷಿಯ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ-7(ಎ) ಎಂದು ಗುರುತಿಸಲಾಯಿತು ಒಂದು ಕಟ್ಟಿಗೆ ಬಡಿಗೆ ಮುದ್ದೆ ಮಾಲು 1 ಎಂದು ಗುರುತಿಸಲಾಯಿತು. ನಿಪಿ-7 ರಲ್ಲಿ ಏನು ಬರೆದಿರುತ್ತಾರೆ ಎಂಬುದರ ಬಗ್ಗೆ ಮಾಹಿತಿ ನನಗೆ ಇಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸರಕಾರಿ ಸಹಾಯಕ ಅಭೀಯೋಜಕರವರು ಪಾಟಿ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ನ್ಯಾಯಾಲಯದ ಮುಂದೆ ಇರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

ದಿನಾಂಕ 03-12-2015 ರಂದು ಮುಂಜಾನೆ 10.00 ಗಂಟೆಯಿಂದ 11.00 ಗಂಟೆ ಸುಮಾರಿಗೆ ನನಗೆ ಮತ್ತು ಚಾಸಾಃ 5 ರವರನ್ನು ಪೋಲಿಸರು ಜಪ್ತಿ ಪಂಚನಾಮೆ ಸಾಕ್ಷಿದಾರಾಗಿ ಕರೆಸಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಸಮಕ್ಷಮದಲ್ಲಿ ನಿಪಿ-7 ರಂತೆ ಜಪ್ತಿ ಪಂಚನಾಮೆ

ಜರುಗಿಸಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟಿ ಸವಾಲುಃ  ಆರೋಪಿ ಪರ ವಕೀಲರು ಶ್ರೀ.ಜಿ.ಎಸ್.ಎನ್ ಇವರಿಂದ ಇಲ್ಲ**

**ಮರು ವಿಚಾರಣೆಃ  ಇಲ್ಲ**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ**
**ನ್ಯಾಯಾಧೀಶರು ಯಾದಗಿರಿ**

**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಧೀಶರ ನ್ಯಾಯಾಲಯ ಯಾದಗಿರಿ.**

**ಸಿಸಿ ನಂ. 844/2017**

| | | |
|---|---|---|
| ಸಾಕ್ಷಿಯ ಹೆಸರುಃ | ಜಾಲಯ್ಯ | ಫ್ರಾಸಾಃ 6 |
| ತಂದೆ/ಗಂಡನ ಹೆಸರುಃ | ಗೊವಿಂದರಾಯ | ಚಾಸಾಃ 10 |
| ವಯಸ್ಸು ಃ | 67 ವರ್ಷ | ದಿಃ 14-12-2023 |
| ಉದ್ಯೋಗಃ | ನಿವೃತ್ತ ಪೋಲಿಸ ಅಧಿಕಾರಿ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಯಾದಗಿರಿ. | |

**<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ</u>**

ನಾನು 2015 ರಿಂದ 2017 ರವರೆಗೆ ಯಾದಗಿರಿ (ಗ್ರಾ) ಪೋಲಿಸ ಠಾಣೆಯಲ್ಲಿ ನಾನು ಎ.ಎಸ್.ಐ ಎಂದು ಕರ್ತವ್ಯವನ್ನು ನಿರ್ವಹಿಸಿರುತ್ತೇನೆ.

ದಿನಾಂಕ 17-10-2015 ರಂದು ಪ್ರ.ವ. ವರದಿಯನ್ನು ದಾಖಲಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಕಳುಹಿಸಿರುತ್ತೇನೆ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಅದು ಪ್ರ.ವ. ವರದಿಯಾಗಿದ್ದು ಅದನ್ನು ನಿಪಿ-8 ಎಂದು, ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಬಿ)ಮತ್ತು ನಿಪಿ-(ಸಿ) ಎಂದು ಗುರುತಿಸಲಾಯಿತು. ನಿಪಿ-7 ರಲ್ಲಿರುವ ಸಹಿಯನ್ನು ನಿಪಿ-7(ಬಿ) ಎಂದು ಗುರುತಿಸಲಾಯಿತು. ದಿನಾಂಕಃ 17-10-2015 ರಂದು ಗುನ್ಹೆ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಸದರಿ ಗುನ್ಹೆ ಪಂಚನಾಮೆಯನ್ನು ನಿಪಿ-9 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಸದರಿ ಸಾಕ್ಷಿದಾರರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ನಂತರ ಪ್ರಕರಣದ ಕಡತವನ್ನು ಚಾಸಾಃ 11 ರವರಿಗೆ ನೀಡಿರುತ್ತೇನೆ. ಸದರಿ ಆರೋಪಿತರಲ್ಲಿ ನನಗೆ ಕೆಲವು ಜನರು ಮಾತ್ರ ನೆನಪು ಇರುತ್ತದೆ.

**<u>ಪಾಟಿ ಸವಾಲುಃ ಆರೋಪಿತರ ಪರ ಶ್ರೀ. ಜಿ.ಎಸ್.ಎನ್.ವಕೀಲರಿಂದ.</u>**

1. ನಿಪಿ-1 ನ್ನು ನೀಡಲು ಚಾಸಾಃ 1 ರವರು ಒಬ್ಬರೇ ಬಂದಿರುತ್ತಾರೆ. ಸದರಿ ನಿಪಿ-1 ನ್ನು ಚಾಸಾಃ 1 ರವರು ಹೆಳಿದ ಮೇರೆಗೆ ತಯಾರು ಮಾಡಿರುತ್ತೇವೆ. ಸದರಿ ನಿಪಿ-1 ಹೇಳಿಕೆ ಇರುತ್ತದೆ ಆದರೆ ದೂರು ಇರುವುದಿಲ್ಲ ಎಂದರೆ ಸಾಕ್ಷಿಯು ನಾನು ಚಾಸಾಃ 1 ರವರ ಹೇಳಿಕೆಯ ಮೇರೆಗೆ ಬರೆದುಕೊಟ್ಟಿರುತ್ತೇವೆ ಎಂದು ನುಡಿಯುತ್ತಾರೆ. ಚಾಸಾಃ 1 ರವರು ಹೋಂ ಗಾರ್ಡ ಎಂದು ಕೆಲಸ ಮಾಡುತ್ತಾರೆ ಎಂದರೆ ಸಾಕ್ಷಿಯು ಮಾಡಿರಬಹುದು ಎಂದು ನುಡಿಯುತ್ತಾರೆ.

2. ಯರಗೋಳ ಗ್ರಾಮದಲ್ಲಿ ಸಹ ಪೋಲಿಸ ಠಾಣೆ ಇದೆ ಎಂದರೆ ಸರಿ. ಚಾಸಾಃ 1 ರವರು ಯಾದಗಿರಿಯಲ್ಲಿ ವಾಸವಾಗಿರುತ್ತಾರೆ ಎಂದರೆ ನನಗೆ ಮಾಹಿತಿ ಇಲ್ಲ. ಚಾಸಾಃ 1 ರವರು ಯರಗೋಳ ಪೋಲಿಸ ಠಾಣೆಯಲ್ಲಿ ಮಾಹಿತಿ ನೀಡಿರುವುದಿಲ್ಲ ಎಂದರೆ ನನಗೆ ಮಾಹಿತಿ ಇಲ್ಲ. ನಿಪಿ-1 ರಲ್ಲಿರುವ ಸರ್ವೆಸಿ ನಂಬರಗಳು ಬೇರೆ-ಬೇರೆ ಊರುಗಳಲ್ಲಿ ಬರುತ್ತದೆ ಎಂದರೆ ನನಗೆ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ. ಚಾಸಾಃ 1 ರವರು 10 ದಿನದ ಬಳಿಕ ದೂರನ್ನು ನೀಡಿರುತ್ತಾನೆ ಎಂದರೆ ಸರಿ.

3. ನಾನು ಚಾಸಾಃ 1 ರವರು ದೂರನ್ನು ನೀಡಿದ ನಂತರ ಗುನ್ಹೆ ಸ್ಥಳಕ್ಕೆ ಹೋಗಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದೂರು ನೀಡಿದ ದಿನವೇ ಗುನ್ಹೆ ಸ್ಥಳಕ್ಕೆ ಹೋಗಿರುತ್ತೇನೆ. ಗುನ್ಹೆ ಸ್ಥಳದಲ್ಲಿ ಪಂಚರನ್ನು ಬಿಟ್ಟು ಬೇರೆ ಯಾರೂ ಇರಲಿಲ್ಲ. ಗುನ್ಹೆ ಪಂಚನಾಮೆಯನ್ನು ಮಾಡುವಾಗ ಫೋಟೋವನ್ನು ತೆಗೆದಿರುವುದಿಲ್ಲ. ಸದರಿ ಘಟನೆಯಾಗದಿದ್ದರೂ ಕೂಡ ಚಾಸಾಃ 1 ರವರು ಸುಳ್ಳು ದೂರನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-1 ರಲ್ಲಿ ಬರೆದಿರುವ ಸರ್ವೆ ನಂಬರಗಳಲ್ಲಿ ಚಾಸಾಃ 1 ರವರ ಯಾವುದೇ ಜಮೀನು ಇರುವುದಿಲ್ಲ ಎಂದರೆ ಸರಿಯಲ್ಲ. ಸದರಿ ಚಾಸಾಃ 1 ರವರ ಜಮೀನಿನ ಪಹಣಿಗಳನ್ನು ಈ ಪ್ರಕರಣದಲ್ಲಿ ಸಲ್ಲಿಸಿಸರುವುದಿಲ್ಲ. ಸದರಿ ಚಾಸಾಃ 1 ರವರ ಯಾವುದೇ ಜಮೀನು ಇರುವುದಿಲ್ಲ ಆದ್ದರಿಂದ ಯಾವುದೇ ಪಹಣಿ ಹಾಕಿರುವುದಿಲ್ಲ ಎಂದರೆ ಸರಿ. ಸದರಿ ಚಾಸಾಃ 1 ರವರು ಹೋಂ ಗಾರ್ಡ ಇರುತ್ತಾರೆ ಎಂದರೆ ಸರಿ. ಅವರ ಮಾತು ಕೇಳಿ ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರಿಗು ಮತ್ತು ಈ ಪ್ರಕರಣಕ್ಕೂ ಯಾವುದೇ ಸಂಬಂಧವಿರುವುದಿಲ್ಲ ಎಂದರೆ ಸರಿ. ಜಪ್ತಿ ಪಂಚನಾಮೆಯನ್ನು ದಿನಾಂಕಃ 03-12-2015 ರಂದು ಮಾಡಿರುತ್ತೇನೆ. ಅದೇ ದಿನ ಗುನ್ಹೆ ಪಂಚನಾಮೆ ಮಾಡಿರುವುದಿಲ್ಲ. ನಾನು ಯಾವುದೇ ಗುನ್ಹೆ ಮತ್ತು ಜಪ್ತಿ ಪಂಚನಾಮೆಯನ್ನು ಮಾಡದಿದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಜಪ್ತಿ ಮತ್ತು ಗುನ್ಹೆ ಪಂಚನಾಮೆಯನ್ನು ಠಾಣೆಯಲ್ಲಿ ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ**
**ನ್ಯಾಯಾಧೀಶರು ಯಾದಗಿರಿ**